ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ವೃದ್ಧಾಪ್ಯ, ವಿಧವಾ, ಅಂಗವಿಕಲ ಪಿಂಚಣಿ ಪಾವತಿಸದಿರುವ ಬಗ್ಗೆ

ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು) :-

402 (400) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರದ ವತಿಯಿಂದ ಯಾವ ಯಾವ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಪಿಂಚಣಿಯನ್ನು ಪಾವತಿ ಮಾಡಲಾಗುತ್ತಿದೆ;

(ಆ) ಕಳೆದ ಎಂಟು ತಿಂಗಳಿನಿಂದ ವೃದ್ಧಾಪ್ಯ, ವಿಧವಾ, ಅಂಗವಿಕಲ ವೇತನ ಸೇರಿದಂತೆ ಅರ್ಹ ಫಲಾನುಭವಿಗಳಿಗೆ ಪಿಂಚಣಿ ಪಾವತಿಯಾಗುತ್ತಿಲ್ಲವೆಂಬ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪಿಂಚಣಿಯನ್ನೇ ನಂಬಿಕೊಂಡು ಜೀವನ ನಡೆಸುತ್ತಿರುವ ಅರ್ಹ ಫಲಾನುಭವಿಗಳಿಗೆ ಯಾವಾಗ ಪಿಂಚಣಿಯನ್ನು ಪಾವತಿ ಮಾಡಲಾಗುವುದು ?